ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

''೧೯೮೭ನೇ ಇಸವಿಯ ಕರ್ನಾಟಕ ಕೃಷಿ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ,

೧೯೮೭ನೇ ಇಸವಿಯ ಕರ್ನಾಟಕ ಕೃಷಿ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಯಿತು.*

೩) ೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಗ್ರಾಮೀಣ ಅಭಿವೃದ್ಧಿ, ವಸತಿ ಹಾಗೂ ಪಕ್ಷ ಮಂತ್ರಿಗಳ ಪರವಾಗಿ).—

ಮಾನ್ಯ ಅಧ್ಯಕ್ಷರೆ,

೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೆ, ಹಾಲಿ ಇರುವಕ್ಕ ವಿಧೇಯಕದಲ್ಲಿ ೫ ದಿವಸ ಎಂದು ಇದೆ. ಆದರೆ ಈ ಸಮಯ ಸಾಲದು ಎಂದು ೧೫ ದಿವಸ ಎಂದು ತಿದ್ದುಪಡಿ ಮಾಡಿದ್ದೇವೆ. ಇದು ಅತ್ಯಂತ ಸಣ್ಣ ಬದಲಾವಣೆಯಾದ್ದರಿಂದ ಇದನ್ನು ಸಭೆಯು ಅನುಮೋದಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ

''೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ವಿಧೇಯಕವನ್ನು ಪರ್ಯಾಲೋಚಿಸುವುದು,''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಪ್ರಸ್ತಾವ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್.—೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ವಿಧೇಯಕವನ್ನು ತಿದ್ದುಪಡಿ ಮಾಡಿದಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ

೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) ವಿಧೇಯಕವನ್ನು ತಿದ್ದುಪಡಿಯಾದಂತೆ ಅಂಗೀಕರಿಸುವುದು.

* ANNEXURE

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು. ಮತ್ತು ವಿಧೇಯಂಕ್ಕಕ್ಕೆ ಒಪ್ಪಿಗೆ ದೊರೆಯಿತು)

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ, ಲಕ್ಷ್ಮೀಸಾಗರ್ ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) ಮಾನ್ಯ ಕಂದಾಯ, ಯೋಜನೆ ಹಾಗೂ ಕಾರ್ಮಿಕ ಮಂತ್ರಿಗಳ ಪರವಾಗಿ).—

ಮಾನ್ಯ ಅಧ್ಯಕ್ಷರೆ,

"೧೯೮೭ನೇ ಇಸವಿಯ ಕರ್ನಾಟಕ ರಾಜ್ಯ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಂಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು).— ಮಾನ್ಯ ಅಧ್ಯಕ್ಷರೆ, ಇದರಲ್ಲಿ ೨ ವಿಷಯಗಳಿವೆ. ಮೊದಲನೆಯದು ಎಂದರೆ ರಿಜಿಸ್ಟ್ರೇಷನ್ ಆಕ್ಟ್ ಸೆಕ್ಷನ್ ೩೦ರ ಪ್ರಕಾರ ರೆಸಿಡೆನ್ಸಿ ಲ್ಯಾಂಡ್‌ನಲ್ಲಿ ನಮ್ಮ ರಾಜ್ಯದಲ್ಲಿರತಕ್ಕ ಸ್ಥಿರಾಸ್ತಿಗಳನ್ನು ರಿಜಿಸ್ಟರ್ ಮಾಡ ಬೇಕೆಂದಿದೆ. ಅದನ್ನು ಮಾಡಿದ್ದೂ ಆಯಿತು. ಆದರೆ ಇದನ್ನು ಮಾಡಬಾರದೆಂದು ಈ ಸಭೆಯು ಒಂದು ತಿದ್ದುಪಡಿಯನ್ನು ಮಾಡಿ ಆ ವಿಧೇಯಂಕವನ್ನು ಮಾನ್ಯ ರಾಷ್ಟ್ರಾಧ್ಯಕ್ಷರಿಗೆ ಅನುಮೋದನೆಗಾಗಿ ಕಳುಹಿಸಿ ಕೊಡಲಾಗಿದೆ. ಇದರಿಂದ ಉಂಟಾಗಬಹುದಾದ ತೊಂದರೆಯನ್ನು ಪರಿಗಣಿಸುವುದು ಒಂದು ತಿದ್ದುಪಡಿ.

ಇನ್ನು ಎರಡನೆಯದು ಎಂದರೆ ಪಾರ್ಟ್‌ನರ್‌ಷಿಪ್‌ನಲ್ಲಿ ಒಂದು ಹೊಸ ವಿಚಾರ ಬೆಳಕಿಗೆ ಬಂದಿದೆ. ಸ್ಥಿರಾಸ್ತಿ ಒಂದೇ ಕುಟುಂಬಕ್ಕೆ ಸೇರಿದ್ದರೆ ಅದನ್ನು ಭಾಗಮಾಡಿಕೊಳ್ಳತಕ್ಕ ಸಂದರ್ಭದಲ್ಲಿ ರಿಜಿಸ್ಟ್ರೇಷನ್ ಮಾಡಿಕೊಳ್ಳುವುದಾಗಿ ಮಾರ್ಕೆಟ್ ವ್ಯಾಲ್ಯೂ ಮೇಲೆ ಸ್ಟ್ಯಾಂಪ್ ಫೀಸ್ ಕೊಡಬೇಕು. ಈಗ ಏನು ಮಾಡಿದ ರೆ ತಿದ್ದ್ದೇವೆಂದರೆ ಪಾರ್ಟ್‌ನರ್‌ಷಿಪ್‌ನಲ್ಲಿ ಒಂದು ಸಂಸ್ಥೆಯನ್ನು ಮಾಡಿಕೊಂಡು ಅದರಲ್ಲಿ ಸ್ಥಿರಾಸ್ತಿಯನ್ನು ಹಂಚಿಕೊಳ್ಳುವಾಗ ಪಾರ್ಟ್‌ನರ್‌ಷಿಪ್‌ನಲ್ಲಿ ನನಗೆ ಬಂದಿರತಕ್ಕ ಭಾಗವನ್ನು ನೀನು ತೆಗೆದುಕೋ. ನಿನಗೆ ಬಂಧಿರತಕ್ಕ ಭಾಗವನ್ನು ನಾನು ತೆಗೆದುಕೊಳ್ಳುತ್ತೇನೆ ಎನ್ನತಕ ಒಂದು ವ್ಯವಸ್ಥೆಯನ್ನು ಮಾಡಿಕೊಂಡರೆ ಅದರ ಮೇಲೆ ವಿಧಿಸತಕ್ಕ ರಿಜಿಸ್ಟ್ರೇಷನ್ ಶುಲ್ಕ ಕಡಿಮೆಯಾಗುತ್ತದೆ.

ಈ ರೀತಿ ಸ್ಥಿರಾಸ್ಥಿತಿಯ ಮೇಲಿನ ಸ್ಟ್ಯಾಂಪ್ ಡ್ಯೂಟಿಯನ್ನು ತಪ್ಪಿಸಿಕೊಳ್ಳುವುದಕ್ಕೆ ಪ್ರಯತ್ನ ನಡೆದಿದೆ. ಅದನ್ನು ಸರಿಪಡಿಸುವುದಕ್ಕಾಗಿ ಈ ತಿದ್ದುಪಡಿಯನ್ನು ತಂದಿದ್ದೇವೆ. ಇದರಿಂದ ಸರ್ಕಾರಕ್ಕೆ ಆದಾಯ ಬರುತ್ತದೆ. "ಚಾಪೆ ಕೆಳಗೆ ಮತ್ತು ರಂಗೋಲೆ ಕೆಳಗೆ ತೂರಿ ತಪ್ಪಿಸಿಕೊಳ್ಳುತ್ತಾರೆ" ಎನ್ನುವ ಗಾದೆಯಂತೆ, ಅದನ್ನು ತಪ್ಪಿಸುವುದಕ್ಕಾಗಿ ಈ ಮಸೂದೆಯನ್ನು ತಂದಿದ್ದೇವೆ.

ಶ್ರೀ ಎಸ್. ಬಂಗಾರಪ್ಪ.—ಪಾರ್ಟಿಷನ್‌ಗೆ ಸಂಬಂಧ ಪಡುವುದಿಲ್ಲವೆ ?

ಶ್ರೀ ಎ. ಲಕ್ಷ್ಮೀಸಾಗರ್.—ಇಲ್ಲ. ಪಾರ್ಟ್‌ನರ್‌ಶಿಪ್‌ನಿಂದ ಬೇರೆ ಆಗುವವರಿಗೆ ಮಾತ್ರ ಇದು ಅನ್ವಯವಾಗುತ್ತದೆ. ಆದ್ದರಿಂದ ಮಾನ್ಯ ಸಭೆಯು ಇದಕ್ಕೆ ಒಪ್ಪಿಗೆ ಕೊಡಬೇಕೆಂದು ಕೇಳಿ ಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, "೧೯೮೭ರ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಂಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಂಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3 ರ ವರೆಗೆ:—

ಅಧ್ಯಕ್ಷರು.—"ಖಂಡ ೨ ರಿಂದ ೩ ರ ವರೆಗೆ ಎರಡೂ ಸೇರಿದಂತೆ ಈ ವಿಧೇಯಂಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು